**All India Radio: Bangalore**
**National Bulletin In Kannada**
**18.05.2026  13.10 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**18.05.2026  13.10 hrs**

**<>><><*><><<>**

ಮುಖ್ಯಾಂಶಗಳು

**೧. ಯಶಸ್ವಿ ಸ್ವೀಡನ್ ಪ್ರವಾಸ ಸಂಪನ್ನಗೊಳಿಸಿ ನಾರ್ವೆಗೆ ಪ್ರಯಾಣ ಬೆಳೆಸಿದ ಪ್ರಧಾನಿ ನರೇಂದ್ರ ಮೋದಿ**

**೨. ವಿಯೇಟ್ನಾಂ, ದಕ್ಷಿಣ ಕೊರಿಯಾ ದ್ವಿರಾಷ್ಟ್ರ ಪ್ರವಾಸ ಆರಂಭಿಸಿದ  ರಕ್ಷಣಾ ಸಚಿವ ರಾಜನಾಥ್ ಸಿಂಗ್ ; ಇಂಡೋ ಪೆಸಿಫಿಕ್ ಪ್ರದೇಶದಲ್ಲಿ ಸಹಕಾರಕ್ಕೆ ಒತ್ತು**

**೩. ಕೇರಳಂನ ನೂತನ ಮುಖ್ಯಮಂತ್ರಿಯಾಗಿ ವಿ.ಡಿ.ಸತೀಸನ್ ಪದಗ್ರಹಣ; ಪ್ರಧಾನಿ ಸೇರಿದಂತೆ ಗಣ್ಯರಿಂದ ಅಭಿನಂದನೆ**

**೪. ಐಪಿಎಲ್ ಟಿ-೨೦ ಕ್ರಿಕೆಟ್ ; ಇಂದು ಚೆನ್ನೈ ಸೂಪರ್ ಕಿಂಗ್ಸ್, ಸನ್ ರೈಸರ್ಸ್ ಹೈದರಾಬಾದ್ ತಂಡಗಳ ನಡುವೆ ಹಣಾಹಣಿ**

**<>><><*><><<>**

ಪ್ರಧಾನಿ ನರೇಂದ್ರ ಮೋದಿ, ತಮ್ಮ ಐದು ರಾಷ್ಟ್ರಗಳ ವಿದೇಶಿ ಪ್ರವಾಸದ ಭಾಗವಾಗಿ ಸ್ವೀಡನ್ ಭೇಟಿಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿ ಇಂದು ನಾರ್ವೆಗೆ ತೆರಳಿದ್ದಾರೆ.  ಇದು ಪ್ರಧಾನಿ ಮೋದಿಯವರ ಮೊದಲ ನಾರ್ವೆ ಪ್ರವಾಸವಾಗಿದ್ದು, ಕಳೆದ ೪೩ ವರ್ಷಗಳಲ್ಲಿ ಭಾರತದ ಪ್ರಧಾನಿಯೊಬ್ಬರು ಆ ದೇಶಕ್ಕೆ ನೀಡುತ್ತಿರುವ ಮೊದಲ ಭೇಟಿಯಾಗಿದೆ. ಈ ಪ್ರವಾಸದ ಅವಧಿಯಲ್ಲಿ ಪ್ರಧಾನಿಯವರು ಅಲ್ಲಿನ ರಾಜ ಐದನೇ ಹರಾಲ್ಡ್ ಮತ್ತು ರಾಣಿ ಸೋಂಜಾ ಅವರನ್ನು ಭೇಟಿಯಾಗಲಿದ್ದಾರೆ ಹಾಗೂ ನಾರ್ವೆ ಪ್ರಧಾನಿ ಜೊನಾಸ್ ಗಹರ್ ಸ್ಟೋರ್ ಅವರೊಂದಿಗೆ ಉನ್ನತ ಮಟ್ಟದ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಇದರ ಜೊತೆಗೆ ಉಭಯ ದೇಶಗಳ ಪ್ರಧಾನಿಗಳು ಜಂಟಿಯಾಗಿ 'ಭಾರತ-ನಾರ್ವೆ ಉದ್ಯಮ ಮತ್ತು ಸಂಶೋಧನಾ ಶೃಂಗಸಭೆ'ಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.  ನಾಳೆ '೩ನೇ ಭಾರತ-ನಾರ್ಡಿಕ್ ಶೃಂಗಸಭೆ' ಜರುಗಲಿದ್ದು, ತಂತ್ರಜ್ಞಾನ, ಆವಿಷ್ಕಾರ, ಹಸಿರು ಇಂಧನ ಪರಿವರ್ತನೆ, ಸುಸ್ಥಿರ ಅಭಿವೃದ್ಧಿ, ರಕ್ಷಣೆ, ಬಾಹ್ಯಾಕಾಶ ಮತ್ತು ಆರ್ಕ್ಟಿಕ್ ಸಂಶೋಧನಾ ವಲಯಗಳಲ್ಲಿ ಭಾರತ ಹಾಗೂ ನಾರ್ಡಿಕ್ ರಾಷ್ಟ್ರಗಳ ನಡುವಿನ ಬಾಂಧವ್ಯಕ್ಕೆ ಕಾರ್ಯತಂತ್ರದ ಹೊಸ ಆಯಾಮವನ್ನು ನೀಡಲಿದೆ. ನಾರ್ವೆಗೂ ತೆರಳುವ ಮುನ್ನ ಇಂದು ಬೆಳಗ್ಗೆ ಪ್ರಧಾನಿ ಮೋದಿ, ಸ್ವೀಡನ್ ಪ್ರಧಾನಿಯವರೊಂದಿಗೆ ಮಹಾನ್ ಕವಿ ರವಿಂದ್ರನಾಥ್ ಠಾಗೋರ್ ಅವರ

ಸ್ವೀಡನ್ ಭೇಟಿಯ ಶತಮಾನೋತ್ಸವದ ಸ್ಮಾರಣಾರ್ಥವಾಗಿ ಟಾಗೋರ್-ಸ್ವೀಡನ್ ಉಪನ್ಯಾಸ ಸರಣಿಗೆ ಚಲನೆ ನೀಡಿದ್ದಾರೆ.

<>><><*><><<>

ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ವಿಯೆಟ್ನಾಂ ಮತ್ತು ದಕ್ಷಿಣ ಕೊರಿಯಾ ರಾಷ್ಟ್ರಗಳ ದ್ವಿಪಕ್ಷೀಯ ಪ್ರವಾಸಕ್ಕಾಗಿ ಇಂದು ಪ್ರಯಾಣ ಬೆಳೆಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ನೀಡಿರುವ ಅವರು, ಈ ಭೇಟಿಯು ಎರಡೂ ರಾಷ್ಟ್ರಗಳೊಂದಿಗೆ ಭಾರತದ ಬಾಂಧವ್ಯವನ್ನು ವಿಸ್ತರಿಸುವಲ್ಲಿ ಪ್ರಮುಖ ಪಾತ್ರ ವಹಿಸಲಿದೆ ಎಂದು ತಿಳಿಸಿದ್ದಾರೆ. ರಕ್ಷಣಾ ಕೈಗಾರಿಕಾ ಸಹಭಾಗಿತ್ವವನ್ನು ಬಲಪಡಿಸುವುದು, ಕಾರ್ಯತಂತ್ರದ ಮಿಲಿಟರಿ ಸಹಕಾರವನ್ನು ಗಾಢವಾಗಿಸುವುದು ಹಾಗೂ ಇಂಡೋ-ಪೆಸಿಫಿಕ್ ಪ್ರದೇಶದಲ್ಲಿ ಶಾಂತಿ ಮತ್ತು ಸ್ಥಿರತೆಯನ್ನು ಉತ್ತೇಜಿಸುವುದು ಈ ಪ್ರವಾಸದ ಪ್ರಮುಖ ಉದ್ದೇಶವಾಗಿದೆ. ವಿಯೆಟ್ನಾಂ ಭೇಟಿಯ ವೇಳೆ ರಾಜನಾಥ್ ಸಿಂಗ್ ಅವರು ಅಲ್ಲಿನ ರಾಷ್ಟ್ರೀಯ ರಕ್ಷಣಾ ಸಚಿವ ಜನರಲ್ ಫಾನ್ ವ್ಯಾನ್ ಗಿಯಾಂಗ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ನಾಳೆ ವಿಯೆಟ್ನಾಂನ ಮಾಜಿ ಅಧ್ಯಕ್ಷ ಹೋ ಚಿ ಮಿನ್ ಅವರ ೧೩೬ನೇ ಜನ್ಮದಿನಾಚರಣೆಯ ಸಂದರ್ಭದಲ್ಲೇ ಸಚಿವರ ಈ ಭೇಟಿ ಆಯೋಜನೆಗೊಂಡಿದೆ. ದಕ್ಷಿಣ ಕೊರಿಯಾ ಪ್ರವಾಸದ ಸಂದರ್ಭದಲ್ಲಿ ಅಲ್ಲಿನ ರಕ್ಷಣಾ ಸಚಿವ ಅನ್ ಗ್ಯು-ಬಾಕ್ ಅವರೊಂದಿಗೆ ಮಾತುಕತೆ ನಡೆಸಲಿರುವ ರಾಜನಾಥ್ ಸಿಂಗ್, ರಕ್ಷಣಾ ಸಹಕಾರದ ಪ್ರಗತಿಯನ್ನು ಪರಾಮರ್ಶಿಸಲಿದ್ದಾರೆ ಹಾಗೂ ಪರಸ್ಪರ ಹಿತಾಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ವಿಚಾರ ವಿನಿಮಯ ಮಾಡಲಿದ್ದಾರೆ.

<>><><*><><<>

ಕೇರಳಂನ ೧೩ನೇ ಮುಖ್ಯಮಂತ್ರಿಯಾಗಿ ಹಿರಿಯ ಕಾಂಗ್ರೆಸ್ ನಾಯಕ ವಿ.ಡಿ.ಸತೀಸನ್ ಇಂದು ಪ್ರಮಾಣವಚನ ಸ್ವೀಕರಿಸಿದರು. ಇದರೊಂದಿಗೆ ಕಳೆದ ೧೦ ವರ್ಷಗಳ ಬಳಿಕ ಕೇರಳದಲ್ಲಿ ಕಾಂಗ್ರೆಸ್ ನೇತೃತ್ವದ ಯುಡಿಎಫ್ ಸರ್ಕಾರ ಅಧಿಕಾರಕ್ಕೆ ಬಂದಂತಾಗಿದೆ. ತಿರುವನಂತಪುರಂನ ಕೇಂದ್ರೀಯ ಕ್ರೀಡಾಂಗಣದಲ್ಲಿ ನಡೆದ ಸಮಾರಂಭದಲ್ಲಿ ರಾಜ್ಯಪಾಲ ರಾಜೇಂದ್ರ ಅರ್ಲೇಕರ್, ಸತೀಸನ್ ಅವರಿಗೆ ಅಧಿಕಾರ ಗೌಪ್ಯತೆಯ ಪ್ರಮಾಣವಚನ ಬೋಧಿಸಿದರು. ಮುಖ್ಯಮಂತ್ರಿಯವರೊಂದಿಗೆ ಐಯುಎಂಎಲ್‌ನ ಪಿ.ಕೆ.ಕುನ್ಹಾಲಿಕುಟ್ಟಿ, ಕಾಂಗ್ರೆಸ್‌ನ ರಮೇಶ್ ಚೆನ್ನಿತ್ತಲ ಮತ್ತು ಸನ್ನಿ ಜೋಸೆಫ್ ಸೇರಿದಂತೆ ಒಟ್ಟು ೨೧ ಸದಸ್ಯರ ಸಚಿವ ಸಂಪುಟ ಪ್ರಮಾಣ ವಚನ ಸ್ವೀಕರಿಸಿತು. ಪ್ರಧಾನಿ ನರೇಂದ್ರ ಮೋದಿ ಸಾಮಾಜಿಕ ಮಾಧ್ಯಮ ಸಂದೇಶದ ಮೂಲಕ ನೂತನ ಮುಖ್ಯಮಂತ್ರಿಯವರನ್ನು ಅಭಿನಂದಿಸಿದ್ದಾರೆ. ಕೇರಳಂನ ಜನರ ಆಕಾಂಕ್ಷೆಗಳನ್ನು ಈಡೇರಿಸುವಲ್ಲಿ ನೂತನ ಸರ್ಕಾರಕ್ಕೆ ಕೇಂದ್ರದಿಂದ ಸಂಪೂರ್ಣ ಬೆಂಬಲ ನೀಡುವುದಾಗಿ ಭರವಸೆ ನೀಡಿದ್ದಾರೆ. ಸಮಾರಂಭದಲ್ಲಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕಾಂಗ್ರೆಸ್ ಮುಖಂಡ ಹಾಗೂ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ನಾಯಕಿ ಪ್ರಿಯಾಂಕ ಗಾಂಧಿ ವಾದ್ರಾ ಸೇರಿದಂತೆ ಕರ್ನಾಟಕ, ತೆಲಂಗಾಣ ಮತ್ತು ಹಿಮಾಚಲ ಪ್ರದೇಶದ

ಮುಖ್ಯಮಂತ್ರಿಗಳು ಉಪಸ್ಥಿತರಿದ್ದರು. ನೂತನ ಸಚಿವ ಸಂಪುಟದಲ್ಲಿ ಕಾಂಗ್ರೆಸ್‌ನ ೧೨, ಐಯುಎಂಎಲ್‌ನ ೫, ಹಾಗೂ ಮೈತ್ರಿಕೂಟದ ಇತರ ಪಕ್ಷಗಳ ತಲಾ ಒಬ್ಬರು ಸಚಿವರಾಗಿ ಸ್ಥಾನ ಪಡೆದಿದ್ದಾರೆ.

**<>><><*><><<>**

ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಛತ್ತೀಸ್‌ಗಢದ ರಾಯ್‌ಪುರದಲ್ಲಿ ಮುಂದಿನ ತಲೆಮಾರಿನ ತುರ್ತು ದೂರವಾಣಿ ಸಂಖ್ಯೆ ೧೧೨ರ ೪೦೦ ವಾಹನಗಳಿಗೆ ಚಾಲನೆ ನೀಡಿದರು. ಈ ಹಿಂದೆ ರಾಜ್ಯದ ಕೇವಲ ೧೬ ಜಿಲ್ಲೆಗಳಲ್ಲಿ ಲಭ್ಯವಿದ್ದ ಈ ಸೇವೆ ಈಗ ಛತ್ತೀಸ್‌ಗಢದ ಎಲ್ಲಾ ೩೩ ಜಿಲ್ಲೆಗಳಲ್ಲಿ ವಿಸ್ತರಿಸಲಾಗಿದೆ. ಈ ಕಾರ್ಯಕ್ರಮದ ಬಳಿಕ ಬಸ್ತಾರ್‌ಗೆ ತೆರಳಿರುವ ಸಚಿವರು ಅಲ್ಲಿ ನೇತನಾರ್ ಗ್ರಾಮದ ಸಿಆರ್‌ಪಿಎಫ್ ಶಿಬಿರ ಆವರಣದಲ್ಲಿ ಸಾರ್ವಜನಿಕ ಸೇವಾ ಕೇಂದ್ರವನ್ನು ಉದ್ಘಾಟಿಸಲಿದ್ದಾರೆ. ನಂತರ ಜಗದಲ್‌ಪುರಕ್ಕೆ ಭೇಟಿ ನೀಡಲಿರುವ ಸಚಿವರು ಅಮರ್ ವಾಟಿಕದಲ್ಲಿ ಹುತಾತ್ಮರಿಗೆ ಗೌರವನಮನ ಸಲ್ಲಿಸಿದ್ದಾರೆ. ಬಳಿಕ ಅಲ್ಲಿನ ಬಾದಲ್ ಅಕಾಡೆಮಿಯಲ್ಲಿ ಹುತಾತ್ಮರ ಕುಟುಂಬಸ್ಥರು, ಭದ್ರತಾ ಸಿಬ್ಬಂದಿ, ನಕ್ಸಲ್ ಹಿಂಸಾಚಾರ ಪೀಡಿತರು ಮತ್ತು ಸ್ಥಳೀಯ ಸಮುದಾಯದ ಪ್ರತಿನಿಧಿಗಳೊಂದಿಗೆ ಸಂವಾದ ನಡೆಸಲಿದ್ದಾರೆ. ಸಂಜೆ 'ಬಸ್ತಾರ್ ಕೆ ಸಾಂಗ್' ಜಾನಪದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಭಾಗವಹಿಸಲಿರುವ ಅವರು, ನಾಳೆ ಜಗದಾಲ್‌ಪುರದಲ್ಲಿ ತಮ್ಮ ಅಧ್ಯಕ್ಷತೆಯಲ್ಲಿ ನಡೆಯಲಿರುವ ಕೇಂದ್ರ ವಲಯ ಮಂಡಳಿಯ ೨೬ನೇ ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಈ ಮಹತ್ವದ ಸಭೆಯಲ್ಲಿ ಛತ್ತೀಸ್‌ಗಢ, ಮಧ್ಯಪ್ರದೇಶ, ಉತ್ತರ ಪ್ರದೇಶ ಮತ್ತು ಉತ್ತರಾಖಂಡದ ಮುಖ್ಯಮಂತ್ರಿಗಳು ಭಾಗವಹಿಸಲಿದ್ದಾರೆ.

**<>><><*><><<>**

ಪಶ್ಚಿಮ ಬಂಗಾಳದ ಸುವೇಂದು ಅಧಿಕಾರಿ ನೇತೃತ್ವದ ಬಿಜೆಪಿ ಸರ್ಕಾರವು ರಾಜ್ಯ ಸರ್ಕಾರಿ ಉದ್ಯೋಗಾಕಾಂಕ್ಷಿಗಳಿಗೆ ಸಿಹಿ ಸುದ್ದಿ ನೀಡಿದ್ದು, ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಹೆಚ್ಚಿಸಿ ಐತಿಹಾಸಿಕ ತೀರ್ಮಾನ ಕೈಗೊಂಡಿದೆ. ಹೊಸ ನಿಯಮದಂತೆ, ಎ ವೃಂದದ ಹುದ್ದೆಗಳ ನೇಮಕಾತಿಗೆ ಗರಿಷ್ಠ ವಯೋಮಿತಿಯನ್ನು ೪೧ ವರ್ಷಗಳಿಗೆ ನಿಗದಿಪಡಿಸಲಾಗಿದೆ. ಅದೇ ರೀತಿ, ಬಿ ವೃಂದದ 'ಹುದ್ದೆಗಳಿಗೆ ೪೪ ವರ್ಷ ಹಾಗೂ ಸಿ ವೃಂದದ ಮತ್ತು ಡಿ ವೃಂದದ ಹುದ್ದೆಗಳಿಗೆ ಗರಿಷ್ಠ ವಯೋಮಿತಿಯನ್ನು ೪೫ ವರ್ಷಗಳಿಗೆ ಏರಿಕೆ ಮಾಡಲಾಗಿದೆ. ಈಗಾಗಲೇ ಕೆಲವು ನಿರ್ದಿಷ್ಟ ಹುದ್ದೆಗಳಿಗೆ ಇದಕ್ಕಿಂತ ಹೆಚ್ಚಿನ ವಯೋಮಿತಿ ಅಸ್ತಿತ್ವದಲ್ಲಿದ್ದರೆ, ಅಂತಹ ಕಡೆಗಳಲ್ಲಿ ಹಳೆಯ ನಿಯಮಗಳೇ ಮುಂದುವರಿಯಲಿವೆ ಎಂದು ಸರ್ಕಾರ ಸ್ಪಷ್ಟಪಡಿಸಿದೆ. ಸರ್ಕಾರದ ಈ ನಿರ್ಧಾರವು ರಾಜ್ಯದ ಸಾವಿರಾರು ನಿರುದ್ಯೋಗಿ ಯುವಕರಿಗೆ ಹೆಚ್ಚಿನ ಉದ್ಯೋಗಾವಕಾಶಗಳನ್ನು ಒದಗಿಸಲಿದೆ ಎಂದು ನಿರೀಕ್ಷಿಸಲಾಗಿದೆ.

**<>><><*><><<>**

ಪಶ್ಚಿಮ ಏಷ್ಯಾದಲ್ಲಿ ಉದ್ವಿಗ್ನ ಪರಿಸ್ಥಿತಿ ಮುಂದುವರಿದಿರುವ ನಡುವೆಯೇ, ಸುಮಾರು ೨೦ ಸಾವಿರ ಮೆಟ್ರಿಕ್ ಟನ್ ದ್ರವೀಕೃತ ಪೆಟ್ರೋಲಿಯಂ ಗ್ಯಾಸ್ -ಎಲ್‌ಪಿಜಿ ಹೊತ್ತ ನೌಕೆಯೊಂದು ಗುಜರಾತ್‌ನ ಕಂಡ್ಲಾದಲ್ಲಿರುವ ದೀನ್‌ದಯಾಳ್ ಬಂದರು ಪ್ರಾಧಿಕಾರಕ್ಕೆ ಸುರಕ್ಷಿತವಾಗಿ ಬಂದು ತಲುಪಿದೆ. ಮಾರ್ಷಲ್ ಐಲ್ಯಾಂಡ್ಸ್ ಧ್ವಜ ಹೊಂದಿರುವ 'ಎಂವಿ ಸಿಮಿ' ಎಂಬ ಹೆಸರಿನ ಈ ನೌಕೆಯು ಕತಾರ್‌ನಿಂದ ತನ್ನ ಪ್ರಯಾಣ ಆರಂಭಿಸಿತ್ತು ಹಾಗೂ ಕಂಡ್ಲಾ ಬಂದರಿನಲ್ಲಿ ಲಂಗರು ಹಾಕಿದೆ. ಮಾರ್ಚ್ ಆರಂಭದಿಂದ ಈವರೆಗೆ ಒಟ್ಟು ೧೩ ಭಾರತೀಯ ಧ್ವಜದ ನೌಕೆಗಳು ಹೋರ್ಮುಜ್ ಜಲಸಂಧಿಯನ್ನು ಯಶಸ್ವಿಯಾಗಿ ದಾಟಿವೆ. ಇವುಗಳಲ್ಲಿ ೧೨ ಎಲ್‌ಪಿಜಿ ಟ್ಯಾಂಕರ್‌ಗಳು ಹಾಗೂ ಒಂದು ಕಚ್ಚಾ ತೈಲ ಹೊತ್ತ ನೌಕೆ ಸೇರಿವೆ. ಜಾಗತಿಕ ಇಂಧನ ಪೂರೈಕೆಯ ದೃಷ್ಟಿಯಿಂದ ಪ್ರಮುಖವಾಗಿರುವ ಈ ಜಲಮಾರ್ಗದ ಮೂಲಕ ಸರಕು ಸಾಗಣೆ ಮುಂದುವರಿದಿರುವುದು ಆರ್ಥಿಕ ದೃಷ್ಟಿಯಿಂದ ಮಹತ್ವದ ಬೆಳವಣಿಗೆಯಾಗಿದೆ.

**<>><><*><><<>**

ಅಂತಾರಾಷ್ಟ್ರೀಯ ಸಮುದ್ರಯಾನ ಮಹಿಳಾ ದಿನದ ಅಂಗವಾಗಿ ಕೇಂದ್ರ ಬಂದರು, ಹಡಗು ಮತ್ತು ಜಲಮಾರ್ಗ ಸಚಿವ ಸರ್ಬಾನಂದ ಸೋನೋವಾಲ್ ಇಂದು ಮಹಿಳಾ ನಾವಿಕರ ಅದಮ್ಯ ಚೇತನಕ್ಕೆ ನಮನ ಸಲ್ಲಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ಉತ್ತಮ ನೀತಿ ಸುಧಾರಣೆಗಳಿಂದಾಗಿ ದೇಶವು ಭಾರತೀಯ ಮಹಿಳಾ ನಾವಿಕರ ಸಂಖ್ಯೆಯಲ್ಲಿ ಭಾರಿ ಹೆಚ್ಚಳವನ್ನು ಕಾಣುತ್ತಿದೆ ಎಂದು ಹೇಳಿದ್ದಾರೆ. ನಾರಿ ಶಕ್ತಿಯು ಮುಂಚೂಣಿಯಲ್ಲಿದ್ದು, ಭಾರತ ಮತ್ತು ಜಾಗತಿಕ ಕಡಲ ವಲಯವನ್ನು ಉಜ್ವಲ, ಹೆಚ್ಚು ಅಂತರ್ಗತ ಭವಿಷ್ಯದತ್ತ ಕೊಂಡೊಯ್ಯುತ್ತಿದೆ ಎಂದು ಅವರು ಹೇಳಿದರು.

**<>><><*><><<>**

ಇಂದು ಚೆನ್ನೈನಲ್ಲಿ ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ಹಾಗೂ ಸನ್ ರೈಸರ್ಸ್ ಹೈದರಾಬಾದ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ. ದೆಹಲಿ ಅರುಣ್‌ಜೇಟ್ಲಿ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ತಂಡ ರಾಜಸ್ಥಾನ್ ರಾಯಲ್ಸ್ ತಂಡವನ್ನು ೫ ವಿಕೆಟ್‌ಗಳಿಂದ ಮಣಿಸಿತು.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><><ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೨.೩೦ ಕ್ಕೆ ><><<>**